ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 128 ಎಂಎನ್‌ವೈ 2019, ದಿನಾಂಕ: 20-01-2020ರಲ್ಲಿ ಕೈಗೊಳ್ಳಲು ಉದ್ದೇಶಿಸಿರುವ "Comprehensive Development of Bad Roads and Improvements to Road side Drains, Footpaths, Asphalting and Concreting including culvert to selected main and other connecting roads of Package no 01 in ward no. 14 Bagalagunte of Dasarahalli Division in Dasarahalli Zone (Comprising of 08 works as indicated in Sl. No. 122, 123, 124, 125, 126, 127, 128 and 129" ಪ್ಯಾಕೇಜಿನ ಅಂದಾಜು ಮೊತ್ತ ರೂ.15.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ನಅಇ 128 ಎಂಎನ್‌ವೈ 2019, ದಿನಾಂಕ: 21-01-2020.

2. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ:ಬಿಬಿಎಂಪಿ/ಆಯುಕ್ತರು/ಪಿ.ಆರ್/359/2020-21, ದಿನಾಂಕ:20-03-2021

3. ದಿನಾಂಕ: 21-05-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 21-01-2020ರ ಆದೇಶದಲ್ಲಿ, 2017-18ನೇ ಸಾಲಿನಲ್ಲಿ ಆದೇಶ ಸಂಖ್ಯೆ: ನಅಇ 175 ಎಂಎನ್‌ವೈ 2017 ದಿನಾಂಕ: 26-12-2017ರಂತೆ ಅನುಮೋದಿಗಿಸಲಾಗಿರುವ ಕ್ರಿಯಾಯೋಜನೆಯ ಅನುಬಂಧ-2ರಲ್ಲಿ ಒಳಗೊಂಡಿರುವ ರೂ.250.00 ಕೋಟಿ ಅಂದಾಜು ವೆಚ್ಚದ 23 ಕಾಮಗಾರಿಗಳಿಗೆ ಟೆಂಡರ್ ಶ್ಯೂರ್ ಮಾದರಿ ಅಭಿವೃದ್ಧಿ ಯೋಜನೆಗಳ ಬದಲಾಗಿ 129 ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡಿದ್ದು, ಸದರಿ ಕ್ರಿಯಾ ಯೋಜನೆಯ ಕ್ರಮ ಸಂಖ್ಯೆ: 122, 123, 124, 125, 126, 127, 128 ಮತ್ತು 129 ರ 8 ಕಾಮಗಾರಿಗಳಿಗೆ ಒಟ್ಟು ರೂ.15.00 ಕೋಟಿಗಳ ಅನುದಾನ ನಿಗಧಿಪಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ:20-03-2021ರ ಪತ್ರದಲ್ಲಿ, ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು, ಸರ್ಕಾರದ ಆದೇಶ ಸಂಖ್ಯೆ: ನಅಇ 128 ಎಂಎನ್‌ವೈ 2019, ದಿನಾಂಕ: 20-01-2020 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಹಲವು ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ ಕಾಮಗಾರಿಗಳನ್ನು ತುರ್ತಾಗಿ ಕೈಗೊಳ್ಳಬೇಕಾಗಿರುವುದರಿಂದ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನಿರೀಕ್ಷಿಸಿ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲು ತಾತ್ಪೈಕ ಅನುಮೋದನೆ ನೀಡಿರುವುದಾಗಿ ಬಿಬಿಎಂಪಿ ಆಯುಕ್ತರು ತಿಳಿಸಿರುತ್ತಾರೆ.

2017-18ನೇ ಸಾಲಿನಲ್ಲಿ ಬೆಂಗಳೂರಿಗೆ ವಿಶೇಷ ಮೂಲಭೂತ ಬಂಡವಾಳ ಬೆಂಬಲ ಯೋಜನೆಯಡಿ ಬಿಬಿಎಂಪಿಗೆ ಒದಗಿಸಿರುವ ರೂ.2191.00 ಕೋಟಿಗಳ ಅನುದಾನದಲ್ಲಿ ದಾಸರಹಳ್ಳಿ ವಲಯದ ದಾಸರಹಳ್ಳಿ ವಿಧಾನಸಭಾ ಕ್ಷೇತ್ರಕ್ಕೆ ಅನುಮೋದನೆಯಾಗಿರುವ ಕಾಮಗಾರಿಗಳಿಗೆ ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರು ಕೆ.ಟಿ.ಪಿ.ಪಿ ನಿಯಮಾವಳಿ (Standard Tender Documents) ಪ್ರಕಾರ ಇ-ಪ್ರೊಕ್ಯೂರ್‌ಮೆಂಟ್

. . .2/-

Scanned with CamScanner

ಅಡಿಯಲ್ಲಿ ಟೆಂಡರ್ ಆಹ್ವಾನಿಸಿದ್ದು, ಆಡಳಿತಾತ್ಮಕ ಅನುಮೋದನೆ ಹಾಗೂ ಟೆಂಡರ್ ಅನುಮೋದನೆ ನೀಡುವ ಪ್ರಾಧಿಕಾರವು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ರಚಿತವಾಗಿರುವ ಅಧಿಕಾರಯುಕ್ತ ಸಮಿತಿಗೆ ಇರುತ್ತದೆ ಎಂದು ಬಿಬಿಎಂಪಿ ಆಯುಕ್ತರು ತಿಳಿಸಿರುತ್ತಾರೆ.

ಯೋಜನೆಯನ್ನು ಅನುಷ್ಠಾನಗೊಳಿಸಲು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಿದ್ದು, ಟೆಂಡರ್‌ಗಳ ತಾಂತ್ರಿಕ ಮತ್ತು ಆರ್ಥಿಕ ಮೌಲ್ಯಮಾಪನ ಹಾಗೂ ದರ ಸಂಧಾನವನ್ನು ನಡೆಸಲಾಗಿರುತ್ತದೆ. ತಾಂತ್ರಿಕ ಮತ್ತು ಆರ್ಥಿಕ ಮೌಲ್ಯಮಾಪನದ ನಡವಳಿಯ ಪ್ರತಿಗಳನ್ನು ಲಗತ್ತಿಸಿದ್ದು, ಯೋಜನೆಯ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಸಂಧಾನಿತ ಟೆಂಡರ್‌ಗೆ ಅನುಮೋದನೆ ನೀಡುವಂತೆ ಬಿಬಿಎಂಪಿ ಆಯುಕ್ತರು ಕೋರಿದ್ದು, ಸದರಿ ಕಾಮಗಾರಿಗೆ ಟೆಂಡರ್ ಅಧಿಸೂಚನೆ ಸಂಖ್ಯೆ: EE/DD/TEN/18/2020-21, ದಿನಾಂಕ: 16-09-2020 ರಂತೆ ದ್ವಿ-ಲಕೋಟೆ ಇ-ಪ್ರೊಕ್ಯೂರ್‌ಮೆಂಟ್ ಪದ್ಧತಿಯಂತೆ ರೂ.13,15,84,310.84 (ಟೆಂಡರ್‌ಗಿಟ್ಟ ಮೊತ್ತ) ಟೆಂಡರ್‌ನ್ನು ಕರೆಯಲಾಗಿದ್ದು, ಪ್ರಜಾವಾಣಿ ಮತ್ತು ಟೈಮ್ಸ್ ಆಫ್ ಇಂಡಿಯಾ ದಿನಪತ್ರಿಕೆಗಳಲ್ಲಿ ದಿನಾಂಕ: 20-10-2020 ರಂದು ಪ್ರಕಟಣೆಯನ್ನು ನೀಡಲಾಗಿರುತ್ತದೆ.

"Comprehensive Development of Bad Roads and Improvements to Road side Drains. Footpaths, Asphalting and Concreting including culvert to selected main and other connecting roads of Package no 01 in ward no. 14 Bagalagunte of Dasarahalli Division in Dasarahalli Zone (Comprising of 08 works as indicated in Sl. No. 122, 123, 124, 125, 126, 127, 128 and 129" ಪ್ಯಾಕೇಜಿನ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 128 ಎಂಎಸ್‌ಪಿ 2019, ದಿನಾಂಕ: 21-01-2020 ರಂತೆ ಅನುಮೋದಿತ ಕ್ರಿಯಾ ಯೋಜನೆಯ ಕ್ರಮ ಸಂಖ್ಯೆ: 122, 123, 124, 125, 126, 127, 128 ಮತ್ತು 129 ರಲ್ಲಿ ಒಟ್ಟು ರೂ.1500.00 ಲಕ್ಷಗಳ ಅನುದಾನ ಒದಗಿಸಿದ್ದು, ಸದರಿ ಟೆಂಡರ್‌ನಲ್ಲಿ ಗುತ್ತಿಗೆದಾರರು ಸಲ್ಲಿಸಿರುವ ದಾಖಲೆಗಳನ್ವಯ ದಿನಾಂಕ: 23-02-2021ರ ತಾಂತ್ರಿಕ ಮೌಲ್ಯಮಾಪನ / ಆರ್ಥಿಕ ಮೌಲ್ಯಮಾಪನ ಮತ್ತು ದರ ಸಂಧಾನ ಸಮಿತಿಯ ತೀರ್ಮಾನದಂತೆ ಆರ್ಥಿಕ ಬಿಡ್‌ನ್ನು ದಿನಾಂಕ: 06-03-2021 ರಂದು ತೆರೆಯಲಾಗಿದ್ದು, ವಿವರ ಈ ಕೆಳಕಂಡಂತಿದೆ ಎಂದು ಬಿಬಿಎಂಪಿ ಆಯುಕ್ತರು ತಿಳಿಸಿರುತ್ತಾರೆ.

ಕ್ರಮ ಸಂಖ್ಯೆ	ತಾಂತ್ರಿಕ ಮೌಲ್ಯಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಟೆಂಡರ್‌ಗಿಟ್ಟ ಮೊತ್ತ (ರೂ. ಗಳಲ್ಲಿ)	ಅಧೀಕ್ಷಕ ಅಭಿಯಂತರರು, ಬೆ.ಇ, ಬೆಂಗಳೂರು ರವರ ಪರಿಷ್ಕೃತ ದರಗಳ ಆದೇಶ ಸಂಖ್ಯೆ: ಎಸ್‌ಇಬಿಸಿ/ಎಇ-3/ದರಪಟ್ಟಿ/2020-21, ಸಂ:3967, ದಿನಾಂಕ: 01-01-2021	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ (ರೂ. ಗಳಲ್ಲಿ)	ಮಂಜೂರಾದ ಮತ್ತು ಪ್ರಸಕ್ತ ಚಾಲ್ತಿ ದರಗಳಿಗೆ ಹೋಲಿಸಿದಾಗ ಶೇ.ವಾರು ಹಾಗೂ ಆದೇಶ ಸಂಖ್ಯೆ: ಎಸ್‌ಇಬಿಸಿ/ಎಇ-3/ದರಪಟ್ಟಿ/2020-21, ಸಂ:3967, ದಿ: 01-01-2021 ದರಗಳಿಗೆ ಹೋಲಿಸಿದಾಗ ಶೇ.ವಾರು.	ಷರಾ
1	G CHANDRASHEKAR	13,15,84,310.84	13,72,454,67.89	11,47,43,334.21	(-) 12.79% below (-) 16.40% Below	L1
2	M RAVISH KUMAR (MESSERS B MUNIKRISHNAPPA)			13,42,01,721.82	(+) 1.98% Above (-) 2.22% Below	L2
3	RAMESH THAMMMANNAGOWDA (Ganapathi Stone Crusher)			13,75,05,667.51	(+) 4.50% Above (+) 0.19% Above	L3
4	KONDUR GOPAL RAJU			13,75,91,651.79	(+) 4.56% Above (+) 0.25% Above	L4

. . .3/-

Scanned with CamScanner

ಎಲ್-1 ಬಿಡ್‌ದಾರರಾದ Sri G CHANDRASHEKAR ರವರು ನಮೂದಿಸಿರುವ ಮೊತ್ತ ರೂ.11,47,43,334.21 ಗಳನ್ನು (ಶೇ.12% ರಷ್ಟು ಜಿ.ಎಸ್.ಟಿ ತೆರಿಗೆ ಹೊರತುಪಡಿಸಿ) ಮಂಜೂರಾದ ದರಗಳಿಗೆ ಮತ್ತು ಪ್ರಸಕ್ತ ಚಾಲ್ತಿ ದರಗಳಿಗೆ ಹೋಲಿಸಿದಾಗ ಶೇ.(-)12.79% ರಷ್ಟು ಕಡಿಮೆ ಹಾಗೂ ಅಧೀಕ್ಷಕ ಅಭಿಯಂತರರು, ಕೋಕೋಪಿಯೋಗ ಇಲಾಖೆ, ಬೆಂಗಳೂರು ವೃತ್ತ ಪರಿಷ್ಕೃತ ದರಗಳ ಆದೇಶ ಸಂಖ್ಯೆ: ಎಸ್‌ಇಜಿಸಿ/ಎಇ-3/ದರಪಟ್ಟಿ/2020-21, ಸಂಖ್ಯೆ: 3967, ದಿನಾಂಕ: 01-01-2021 2018-19ನೇ ಸಾಲಿನ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇ. (-)16.40% ಕಡಿಮೆ ದರವಾಗಿದ್ದು, ತಾಂತ್ರಿಕ / ಆರ್ಥಿಕ ಮೌಲ್ಯಮಾಪನ ಮತ್ತು ದರ ಸಂಧಾನ ಸಮಿತಿಯ ಮುಂದೆ ಮಂಡಿಸಿರುವುದಾಗಿ ಬಿಬಿಎಂಪಿ ಆಯುಕ್ತರು ತಿಳಿಸಿರುತ್ತಾರೆ.

ಈ ಮೇರೆಗೆ ಸರ್ಕಾರವು ಅನುಮೋದಿಸಿರುವ ಕ್ರಿಯಾ ಯೋಜನೆಯಂತೆ ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಅಡಳಿತಾತ್ಮಕ ಅನುಮೋದನೆಗಾಗಿ ಹಾಗೂ ಟೆಂಡರ್ ಅನುಮೋದನೆ ಬಗ್ಗೆ ಪ್ರಸ್ತಾವನೆಯನ್ನು ಅಧಿಕಾರಯುಕ್ತ ಸಮಿತಿ ಮುಂದೆ ಮಂಡಿಸಿ, ಅನುಬಂಧದಲ್ಲಿ ಸಭೆಯ ನಡವಳಿಯಂತೆ ಗುತ್ತಿಗೆದಾರರು ನಮೂದಿಸಿರುವ ಟೆಂಡರ್ ಮೊತ್ತ ಮತ್ತು ಅಂದಾಜು ಮೊತ್ತಕ್ಕೆ ಅಡಳಿತಾತ್ಮಕ ಅನುಮೋದನೆ ಕೋರಿದ್ದು, ತೀರ್ಮಾನಿಸುವ ಸೂಕ್ತ ಪ್ರಾಧಿಕಾರವು ಸರ್ಕಾರದ ಮಟ್ಟದ ಟೆಂಡರ್ ಅಂಗೀಕಾರ ಸಮಿತಿಯ ಮುಂದೆ ಇದ್ದು, ಕಾಮಗಾರಿಯ ಅಂದಾಜು ಮೊತ್ತಕ್ಕೆ ಸೂಚಿಸಿದ ಟೆಂಡರ್ ಮೊತ್ತ ಮತ್ತು ಅಡಳಿತಾತ್ಮಕ ಅನುಮೋದನೆಯ ಬಗ್ಗೆ ಸೂಕ್ತ ತೀರ್ಮಾನ ನೀಡುವಂತೆ ಬಿಬಿಎಂಪಿ ಆಯುಕ್ತರು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 21-05-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿ.ಬಿ.ಎಂ.ಪಿ. ಆಯುಕ್ತರ ದಿನಾಂಕ: 19-03-2021ರ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ, ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

"ವಿವರವಾದ ಚರ್ಚೆಯ ನಂತರ "Comprehensive development of Bad Roads and Improvements to road side Drains, Footpaths, Asphalting and Concreting including culvert to selected main and other connecting roads of Package no 01 in word no 14 Bagalagunte of Dasarahalli Division in Dasarahalli Zone Comprising of 08 works as indicated in Sl No 122, 123, 124, 125, 126, 127, 128 and 129" ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಅಡಳಿತಾತ್ಮಕ ಅನುಮೋದನೆ ನೀಡಿ, ಟೆಂಡರ್‌ಗಿಟ್ಟ ಮೊತ್ತವಾದ ರೂ.13,15,84,310.84 ಗಳಿಗೆ ಹೋಲಿಸಿದಾಗ 12.8% ಕಡಿಮೆ ಇರುವ G Chandrashekar ರವರ ರೂ.11,47,43,334.21 ಗಳ ಬಿಡ್ಡನ್ನು ಅನುಮೋದಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು"

ದಿನಾಂಕ: 21-05-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ನಅಇ 54 ಎಂಎನ್‌ವೈ 2021,
ಬೆಂಗಳೂರು, ದಿನಾಂಕ:23-07-2021.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 128 ಎಂಎನ್‌ವೈ 2019, ದಿನಾಂಕ: 20-01-2020 ರಲ್ಲಿ "ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳ" ಕ್ರಿಯಾ ಯೋಜನೆಯ ಅನುಬಂಧದ ಕ್ರಮ

. . .4/-

Scanned with CamScanner

ಸಂಖ್ಯೆ: 122, 123, 124, 125, 126, 127, 128 ಮತ್ತು 129 ರ 08 ಕಾಮಗಾರಿಗಳನ್ನು ಒಗ್ಗೂಡಿಸಿ ಮಾಡಲಾಗಿರುವ "Comprehensive development of Bad Roads and Improvements to road side Drains, Footpaths, Asphalting and Concreting including culvert to selected main and other connecting roads of Package no 01 in word no 14 Bagalagunte of Dasarahalli Division in Dasarahalli Zone Comprising of 08 works as indicated in Sl No 122, 123, 124, 125, 126, 127, 128 and 129" ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ: 21-05-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ, G Chandrashekar ರವರ ಪಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.13,15,84,310.84 ಗಳಿಗೆ ಹೋಲಿಸಿದಾಗ 12.8% ಕಡಿಮೆ ತಂದರೆ ರೂ.11,47,43,334.21 (ಹನ್ನೊಂದು ಕೋಟಿ ನಲವತ್ತೇಳು ಲಕ್ಷದ ನಲವತ್ತ ಮೂರು ಸಾವಿರದ ಮೂನ್ನೂರ ಮೂವತ್ತ ನಾಲ್ಕು ರೂಪಾಯಿಗಳು ಮತ್ತು ಇಪ್ಪತ್ತೊಂದು ಪೈಸೆಗಳು ಮಾತ್ರ) ಗಳ ಟೆಂಡರ್‌ಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಮೊತ್ತಕ್ಕೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.
2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಪಾಲಿಸಿಕೊಂಡು ಅನುಷ್ಠಾನಗೊಳಿಸುವುದು.
3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಶಇ 375 ಎಂಎಸ್‌ಪ್ರೆ 2018, ದಿನಾಂಕ: 20-09-2019ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯ ಅನುದಾನದಲ್ಲಿ ಖೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಅನ್ನು ಬಿಬಿಎಂಪಿಯ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು.
5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ಲಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳುಸಾರ ಕ್ರಮವಹಿಸತಕ್ಕದ್ದು.
6. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು, ಅನುಮೋದನೆ ಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.
7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
8. ಸದರಿ ಬಿಡ್ಡುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.

. . .5/-

Scanned with CamScanner

9. ದಿನಾಂಕ: 21-05-2021ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎಸ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಜಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಜಂಟಿ ಕಾರ್ಯದರ್ಶಿಗಳು ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner